# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 124 (1026) |
| ಸದಸ್ಯರ ಹೆಸರು | : | ಶ್ರೀ ಐವನ್ ಡಿ'ಸೋಜಾ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 22.08.2025 |
| ಉತ್ತರಿಸುವ ಸಚಿವರು | : | ಮಾನ್ಯ ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಕರಾವಳಿ ಅಭಿವೃದ್ಧಿ ಮಂಡಳಿಯಲ್ಲಿ ಕರಾವಳಿ ಭಾಗದ ವಿಧಾನ ಪರಿಷತ್ತಿಗೆ ಚುನಾಯಿತರಾದ ಸದಸ್ಯರನ್ನು ಸದಸ್ಯರನ್ನಾಗಿ ನಾಮನಿರ್ದೇಶನ ಮಾಡದೆ ಇರಲು ಕಾರಣಗಳೇನು; | ಕರಾವಳಿ ಅಭಿವೃದ್ಧಿ ಮಂಡಳಿ ಅಧಿನಿಯಮ 2023ರ ಅಧ್ಯಾಯ II ರ **ಪ್ರಕರಣ 3 ರಂತೆ**<br>(ಎ) ಕರಾವಳಿ ಪ್ರದೇಶವನ್ನು ಭಾಗಶಃ ಅಥವಾ ಪೂರ್ಣವಾಗಿ ಪ್ರತಿನಿಧಿಸುವ, ಸದರಿ ಪ್ರದೇಶದ ಅಧಿಕಾರ ವ್ಯಾಪ್ತಿಯೊಳಗೆ ತಮ್ಮ ಚುನಾವಣಾ ಕ್ಷೇತ್ರಗಳನ್ನು ಹೊಂದಿರುವ ಸಂಸತ್ತಿನ ಮತ್ತು ರಾಜ್ಯ ವಿಧಾನ ಸಭೆಯ ಸದಸ್ಯರು<br>(ಬಿ) ಕರಾವಳಿ ಪ್ರದೇಶದ ಅಧಿಕಾರ ವ್ಯಾಪ್ತಿಯಲ್ಲಿ ಮತದಾರರಾಗಿ ನೊಂದಾಯಿತರಾದ ಹಾಗೂ ನೋಡಲ್ ಜಿಲ್ಲೆಗಳು ಅಥವಾ ತಾಲ್ಲೂಕುಗಳಾಗಿರುವ ಜಿಲ್ಲೆ ಅಥವಾ ತಾಲ್ಲೂಕಿನಲ್ಲಿ ಚುನಾಯಿತರಾದ ರಾಜ್ಯಸಭೆಯ ಮತ್ತು ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರು<br>(ಸಿ) ಕರಾವಳಿ ಪ್ರದೇಶದ ಅಧಿಕಾರ ವ್ಯಾಪ್ತಿಯನ್ನು ಹೊಂದಿರುವ ಜಿಲ್ಲಾ ಪಂಚಾಯಿತಿಗಳ ಅಧ್ಯಕ್ಷರು (ದಕ್ಷಿಣ ಕನ್ನಡ, ಉಡುಪಿ ಮತ್ತು ಉತ್ತರ ಕನ್ನಡ ಜಿಲ್ಲೆಗಳು)<br>(ಡಿ) ರಾಜ್ಯ ಸರ್ಕಾರದಿಂದ ನಾಮನಿರ್ದೇಶಿತರಾದ 10 ಮಂದಿಯನ್ನು ಮೀರದ ಸದಸ್ಯರು, ಅವರ ಪೈಕಿ ಇಬ್ಬರು ಅನುಸೂಚಿತ ಜಾತಿಗಳು ಮತ್ತು ಒಬ್ಬರು ಅನುಸೂಚಿತ ಬುಡಕಟ್ಟುಗಳಿಗೆ ಸೇರಿದ ವ್ಯಕ್ತಿಗಳಾಗಿರತಕ್ಕದ್ದು.<br>(ಇ) ಮಂಡಳಿಯ ಕಾರ್ಯದರ್ಶಿ<br>(ಎಫ್) ಕರಾವಳಿ ಪ್ರದೇಶದಲ್ಲಿರುವ ಪ್ರತಿಯೊಂದು ಜಿಲ್ಲೆಯ ಜಿಲ್ಲಾಧಿಕಾರಿ ಸದಸ್ಯರಾಗಿರುತ್ತಾರೆ. |

| | | |
|---|---|---|
| (ಆ) | ವಿಧಾನ ಸಭೆಯಿಂದ ಚುನಾಯಿತರಾದ ಸದಸ್ಯರು ತಮ್ಮ ಜಿಲ್ಲೆಯನ್ನು ನೋಡಲ್ ಜಿಲ್ಲೆಯಾಗಿ ದಕ್ಷಿಣ ಜಿಲ್ಲೆಯನ್ನಾಗಿ ಗುರುತಿಸಿಕೊಂಡಿದ್ದು, ಸರ್ಕಾರದಿಂದ ಇವರನ್ನು ಪ್ರತ್ಯೇಕವಾಗಿ ಗುರುತಿಸಲಾಗುತ್ತಿದೆಯೇ; (ವಿವರ ನೀಡುವುದು) | -ಇಲ್ಲ- |
| (ಇ) | ನಾಮನಿರ್ದೇಶಿತ ವಿಧಾನ ಪರಿಷತ್ತಿನ ಸದಸ್ಯರು ಈ ಹಿಂದೆ ಮಲೆನಾಡು ಅಭಿವೃದ್ಧಿ ಮಂಡಳಿಗೆ ಸದಸ್ಯರಾಗಿ ನೇಮಕ ಮಾಡಿದ್ದು, ಚುನಾಯಿತ ಸದಸ್ಯರಾದರೂ ಮಂಡಳಿ ಇತರ ಸದಸ್ಯರಂತೆ ಗೌರವಿಸದೆ ಅಗೌರವ ತೋರಿರುವುದು ಸರಿಯೇ? (ವಿವರ ನೀಡುವುದು) | ಯಾವುದೇ ಅಗೌರವ ತೋರಿಸುವ ಪ್ರಶ್ನೆ ಉದ್ಭವಿಸುವುದಿಲ್ಲ. |

**ಸಂಖ್ಯೆ: ಪಿಡಿಎಸ್/59/ಪಿಟಿಪಿ/2025**

**(ಡಿ.ಸುಧಾಕರ್)**